ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 12–11–2018

# ಪತ್ರಿಕಾ ಪ್ರಕಟಣೆ

## ಕೇಂದ್ರ ಸಚಿವ ಹೆಚ್ ಎನ್ ಅನಂತ್‌ಕುಮಾರ್ ನಿಧನಕ್ಕೆ ಗಣ್ಯರ ಸಂತಾಪ

**ಬೆಂಗಳೂರು, ನವೆಂಬರ್ 12 (ಕರ್ನಾಟಕ ವಾರ್ತೆ)**

### ಸಿದ್ಧಾಂತ ಬೇರೆಯಾದರೂ
### ನಾವಿಬ್ಬರೂ ಆತ್ಮೀಯ ಸ್ನೇಹಿತರು : ಡಾ.ಜಿ. ಪರಮೇಶ್ವರ್

ಕೇಂದ್ರ ಸಚಿವ ಅನಂತ ಕುಮಾರ್ ಅವರು ಬಿಜೆಪಿ ಪಕ್ಷದಲ್ಲಿದ್ದರೂ ನನಗೆ ಉತ್ತಮ ಸ್ನೇಹಿತರಾಗಿದ್ದರು. ಅನಂತ ಕುಮಾರ್ ಅವರ ಅಗಲಿಕೆ ವೈಯಕ್ತಿಯವಾಗಿ ದುಃಖ ತರಿಸಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಅವರು ಸಂತಾಪ ಸೂಚಿಸಿದ್ದಾರೆ.

ಮಾಧ್ಯಮದೊಂದಿಗೆ ಮಾತನಾಡಿದ ಅವರು, ಅನಂತ ಕುಮಾರ್ ನನಗೆ ಅತ್ಯಂತ ಆತ್ಮೀಯರು. ಆರು ಬಾರಿ ಸಂಸದರಾಗಿ, ಕೇಂದ್ರ ಸಚಿವರಾಗಿ ಸಾಕಷ್ಟು ಜನ ಪರ ಕೆಲಸ ಮಾಡಿದ್ದಾರೆ. ಪಕ್ಷಾತೀತವಾಗಿ ರಾಜ್ಯಕ್ಕೆ ಸಾಕಷ್ಟು ಕೊಡುಗೆ ನೀಡಿದ್ದಾರೆ. ಅವರೊಬ್ಬ ಸಜ್ಜನ ರಾಜಕಾರಣಿಯಾಗಿದ್ದರು. ರಾಜಕೀಯ ಸಿದ್ಧಾಂತ ಬೇರೆಯೇ ಇದ್ದರೂ ಸಾರ್ವಜನಿಕ ಬದುಕಿನಲ್ಲಿ ಮಾದರಿಯಾಗಿದ್ದಾರೆ.

ಬಹುಶಃ ಅವರ ಆರೋಗ್ಯದ ಬಗ್ಗೆ ಮೊದಲೇ ತಿಳಿದಿದ್ದರೆ ಇಂಥ ಅನಾಹುತವಾಗುತ್ತಿರಲಿಲ್ಲ. ಇತ್ತೀಚೆಗೆ ವಾಜಪೇಯಿ ಅವರ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಇಬ್ಬರು ಅಕ್ಕ ಪಕ್ಕ ಕುಳಿತಿದ್ದವು. ಆಗಲೂ ಅವರು ಆರೋಗ್ಯವಂತರಾಗಿಯೇ ಕಂಡರು. ಅವರ ಕೆಲಸವನ್ನು ಪಕ್ಷಾತೀತವಾಗಿ ಎಲ್ಲರೂ ಸ್ಮರಿಸುವಂಥದ್ದು. ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬಕ್ಕೆ ನೀಡಲಿ ಎಂದು ಶೋಕ ವ್ಯಕ್ತಪಡಿಸಿದರು.

## ಮಲ್ಲಿಕಾರ್ಜುನ ಖರ್ಗೆ:

ಕೇಂದ್ರ ರಾಸಾಯನಿಕ, ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಹೆಚ್ ಎನ್ ಅನಂತಕುಮಾರ್ ಅವರ ನಿಧನಕ್ಕೆ ಲೋಕಸಭೆಯಲ್ಲಿನ ಕಾಂಗ್ರೆಸ್ ಪಕ್ಷದ ಮುಖಂಡ ಎಂ ಮಲ್ಲಿಕಾರ್ಜುನ ಖರ್ಗೆ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಅನಂತಕುಮಾರ್ ಅವರು ನನ್ನ ಪರಮಾಪ್ತ ಸ್ನೇಹಿತರಲ್ಲೊಬ್ಬರಾಗಿದ್ದರು. ಅಷ್ಟೇ ಅಲ್ಲ ! ರಾಜ್ಯ ಕಂಡ ಅತ್ಯುತ್ತಮ ಸಂಸದೀಯ ಪಟು. ಎಲ್ಲರ ಬಗ್ಗೆ ಅನಂತಕುಮಾರ್ ಅವರು ತೋರುತ್ತಿದ್ದ ಪ್ರೀತಿ ಮತ್ತು ವಿಶ್ವಾಸ, ವಿಶೇಷವಾಗಿ ಹಿರಿಯರಿಗೆ ನೀಡುತ್ತಿದ್ದ ಗೌರವ, ಅವಿಸ್ಮರಣೀಯವಾದುದು. ಅವರ ಪ್ರೀತಿಗೆ ಭಾಷೆ , ಪ್ರಾಂತ, ಪಕ್ಷ, ಜಾತಿ ಮತ್ತು ಧರ್ಮದ ಗಡಿ ಇರಲಿಲ್ಲ. ಸಂಸತ್ತಿನೊಳಗೆ ಏರು ಧ್ವನಿಯಲ್ಲಿ ಚರ್ಚೆ ನಡೆಸಿ ವಿರಾಮದ ವೇಳೆಯಲ್ಲಿ ಹೊರಬಂದಾಗ, ಅದೇಕೇ ಇಷ್ಟು ಸಿಟ್ಟು ಇಷ್ಟು ಮುನಿಸು ಎಂದು ಎಳೆ ನಗೆ ಬೀರಿ ಮತ್ತೆ ತನ್ನತ್ತ ಸೆಳೆಯುತ್ತಿದ್ದ ಅಯಸ್ಕಾಂತಿಕ ಶಕ್ತಿ ಅವರಲ್ಲಿತ್ತು. ಕರ್ನಾಟಕದ ವಿಷಯ ಬಂದಾಗ ಅವರು ತೋರುತ್ತಿದ್ದ ಕಳಕಳಿ ಮತ್ತು ಕಾಳಜಿ ಅನುಕಣೀಯವಾದುದು ಎಂದು ಮಧ್ಯಪ್ರದೇಶದಲ್ಲಿ ಪ್ರವಾಸದಲ್ಲಿರುವ ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

## ದೇಶಪಾಂಡೆ ತೀವ್ರ ಸಂತಾಪ

ಬೆಂಗಳೂರು, ನವೆಂಬರ್ 12, 2018- ಕೇಂದ್ರ ಸಂಸದೀಯ ವ್ಯವಹಾರ ಮತ್ತು ರಸಗೊಬ್ಬರ ಖಾತೆ ಸಚಿವ ಅನಂತಕುಮಾರ್ ಅವರ ನಿಧನಕ್ಕೆ ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಆರ್. ವಿ. ದೇಶಪಾಂಡೆ ರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

``ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಿಂದ ಸತತವಾಗಿ ಆರಿಸಿ ಬರುತ್ತಿದ್ದ ಅನಂತಕುಮಾರ್ ಅವರು ಸ್ನೇಹಜೀವಿಯಾಗಿದ್ದರು. ಪಕ್ಷಾತೀತವಾದ ವರ್ಚಸ್ಸನ್ನು ಬೆಳೆಸಿಕೊಂಡಿದ್ದ ಅವರ ಅಕಾಲಿಕ ನಿಧನದಿಂದ ನಾಡು ಒಬ್ಬ ಸಮರ್ಥ ನೇತಾರನನ್ನು ಕಳೆದುಕೊಂಡಿದೆ,'' ಎಂದು ದೇಶಪಾಂಡೆ ಕಂಬನಿ ಮಿಡಿದಿದ್ದಾರೆ.

``ಕೇಂದ್ರ ಸಚಿವರಾಗಿ ಮತ್ತು ಸಂಸತ್ ಸದಸ್ಯರಾಗಿ ಉತ್ತಮ ಸಂಸದೀಯ ಪಟುವಾಗಿದ್ದ ಅನಂತಕುಮಾರ್, ರಾಷ್ಟ್ರ ಮಟ್ಟದಲ್ಲಿ ಕರ್ನಾಟಕದ ಕೆಲಸ-ಕಾರ್ಯಗಳಿಗೆ ಸದಾ ನೆರವಿನ ಹಸ್ತ ಚಾಚುತ್ತಿದ್ದರು. ಈಗ ಅವರನ್ನು ಕಳೆದುಕೊಂಡಿರುವುದು ನಾಡಿಗೆ ಆದ ನಷ್ಟವಾಗಿದೆ,'' ಎಂದು ಸಚಿವರು ದುಃಖಿಸಿದ್ದಾರೆ.

``ಚಿಕ್ಕ ವಯಸ್ಸಿನಲ್ಲೇ ಸಾರ್ವಜನಿಕ ಜೀವನಕ್ಕೆ ಬಂದ ಅನಂತಕುಮಾರ್ ಅವರು ಬಹುಬೇಗ ತಮ್ಮದೇ ಆದ ಛಾಪು ಮೂಡಿಸಿಕೊಂಡಿದ್ದರು. ಇದರ ಜತೆಗೆ ಸಮಾಜಸೇವಾ ಚಟುವಟಿಕೆಗಳಲ್ಲೂ ಅವರು ತಮ್ಮನ್ನು ಇತ್ತೀಚಿನ ವರ್ಷಗಳಲ್ಲಿ ತೊಡಗಿಸಿಕೊಂಡಿದ್ದರು. ಬೆಂಗಳೂರಿಗೆ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಬರಲು ಕಾರಣಕರ್ತರಾದ ಹಲವರಲ್ಲಿ ಅನಂತಕುಮಾರ್ ಕೂಡ ಒಬ್ಬರಾಗಿದ್ದರು'' ಎಂದು ದೇಶಪಾಂಡೆಯವರು ಶೋಕಿಸಿದ್ದಾರೆ.

``ಮೂರು ದಶಕಗಳ ಸಾರ್ವಜನಿಕ ಜೀವನದಲ್ಲಿ ನಾಗರಿಕ ವಿಮಾನಯಾನ, ಯುವಜನ ಮತ್ತು ಕ್ರೀಡೆ, ಸಂಸ್ಕೃತಿ, ರಸಗೊಬ್ಬರ, ಸಂಸದೀಯ ವ್ಯವಹಾರ ಮುಂತಾದ ಖಾತೆಗಳನ್ನು ನಿರ್ವಹಿಸಿದ್ದ ಅವರು, ಹಲವು ಜನಪರ ನೀತಿಗಳ ಹಿಂದಿನ ನೈಜ ಶಕ್ತಿಯಾಗಿದ್ದರು,'' ಎಂದು ಸಚಿವರು ಅಗಲಿದ ನಾಯಕನ ವ್ಯಕ್ತಿತ್ವವನ್ನು ಸ್ಮರಿಸಿಕೊಂಡಿದ್ದಾರೆ.

``ಅನಂತಕುಮಾರ್ ಅವರ ನಿಧನದಿಂದ ಉಂಟಾಗಿರುವ ನೋವನ್ನು ಭರಿಸಿಕೊಳ್ಳುವ ಶಕ್ತಿಯನ್ನು ಭಗವಂತನು ಅವರ ಕುಟುಂಬಕ್ಕೆ ಮತ್ತು ಅಭಿಮಾನಿಗಳಿಗೆ ನೀಡಲಿ. ಅವರ ಆತ್ಮಕ್ಕೆ ಶಾಂತಿ ದೊರಕಲಿ,'' ಎಂದು ಸಚಿವರು ಪ್ರಾರ್ಥಿಸಿದ್ದಾರೆ.